**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆ**

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ:ಸಿ2(2)ಸಿ.ಸಿ.ಎ/ಸು-1/2018-19 ದಿನಾಂಕ:06-06-2019

**ಜ್ಞಾಪನಾ**

ವಿಷಯ: ಇಲಾಖಾ ವಿಚಾರಣೆಗಳನ್ನು ನಡೆಸಲು ನೇಮಕಗೊಂಡು ಕಾರ್ಯನಿರ್ವಹಿಸುವ ವಿಚಾರಣಾಧಿಕಾರಿಗಳಿಗೆ ನೀಡುವ ಸಂಭಾವನೆ ಮೊತ್ತವನ್ನು ಪರಿಷ್ಕರಿಸಿರುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 11 ಸೇಇವಿ 2019 ದಿನಾಂಕ: 24/04/2019

-----

ಕರ್ನಾಟಕ ನಾಗರೀಕ ಸೇವಾ [ ವರ್ಗೀಕರಣ,ನಿಯಂತ್ರಣ ಮತ್ತು ಅಪೀಲು] ನಿಯಮಗಳು-1957ರಡಿ ಸರ್ಕಾರಿ ನೌಕರರ / ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ನೇಮಕಗೊಂಡು ಕಾರ್ಯನಿರ್ವಹಿಸುವ ವಿಚಾರಣಾಧಿಕಾರಿಗಳಿಗೆ ನೀಡುವ ಸಂಭಾವನೆ ಮೊತ್ತವನ್ನು ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಪರಿಷ್ಕರಿಸಿ ಆದೇಶಿಸಿರುತ್ತದೆ. ಆದೇಶದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಸರ್ಕಾರದ ಆದೇಶದಲ್ಲಿ ತಿಳಿಸಿರುವಂತೆ ನಿಯಮಾನುಸಾರ ಅಗತ್ಯ ಕ್ರಮವಹಿಸಲು ಇಲಾಖೆಯ ಅಧೀನ ಅಧಿಕಾರಿಗಳಿಗೆ ಸೂಚಿಸಿದೆ.

[ಅರುಳ್ ಕುಮಾರ್]
**ಜಂಟಿ ನಿರ್ದೇಶಕರು (ಆಡಳಿತ)**

ಗೆ,

1.ಎಲ್ಲಾ ಉಪನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ.
2.ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ.

ಪ್ರತಿಯನ್ನು:-

1.ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು-01 ರವರಿಗೆ.
2.ಮಾನ್ಯ ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಕಲಬುರುಗಿ ವಿಭಾಗ ರವರಿಗೆ.
3.ಮಾನ್ಯ ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಧಾರವಾಡ ವಿಭಾಗ ರವರಿಗೆ.
4.ಎಲ್ಲಾ ನಿರ್ದೇಶಕರು ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ.
5.ಎಲ್ಲಾ ಸಹ ನಿರ್ದೇಶಕರು / ಪ್ರಾಂಶುಪಾಲರು(ಸಿ.ಟಿ.ಇ) ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ.
6.ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ.
7.ಕಛೇರಿ ಪ್ರತಿ.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಇಲಾಖಾ ವಿಚಾರಣೆಗಳಲ್ಲಿ ವಿಚಾರಣಾಧಿಕಾರಿಗಳಾಗಿ ನೇಮಕಗೊಳ್ಳುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ಹಾಗೂ ಸೇವೆಯಲ್ಲಿರುವ ಅಧಿಕಾರಿಗಳಿಗೆ ನೀಡಲಾಗುತ್ತಿರುವ ಸಂಭಾವನೆ ಪರಿಷ್ಕರಣೆ ಬಗ್ಗೆ.

**ಓದಲಾಗಿದೆ:** 1.ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 06 ಸೇಇವಿ 2011, ದಿನಾಂಕ:28.04.2011
2.ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 07 ಸೇಇವಿ 2012, ದಿನಾಂಕ:03.02.2012.
3.ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 45 ಸೇಇವಿ 2014, ದಿನಾಂಕ:08.01.2015
4.ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 29 ಸೇಇವಿ 2017, ದಿನಾಂಕ:02.02.2019

**ಪ್ರಸ್ತಾವನೆ:**

ಕರ್ನಾಟಕ ನಾಗರಿಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)ನಿಯಮಗಳು, 1957ರಡಿ ಸರ್ಕಾರಿ ನೌಕರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ಸರ್ಕಾರವು ಮೇಲೆ(1)ರಲ್ಲಿ ಓದಲಾದ ದಿನಾಂಕ:28.04.2011ರ ಆದೇಶದಲ್ಲಿ ಪ್ರತಿ ವಿಚಾರಣೆಗೆ ರೂ.15,000/–(ಹದಿನೈದು ಸಾವಿರ ರೂಪಾಯಿಗಳು) ಸಂಭಾವನೆಯನ್ನು (ವಾಹನ ಭತ್ಯೆಯೂ ಸೇರಿದಂತೆ) ನಿಗದಿಪಡಿಸಿದೆ. ಮೇಲೆ(3)ರಲ್ಲಿ ಓದಲಾದ ದಿನಾಂಕ:08.01.2015ರ ಆದೇಶದಲ್ಲಿ ಸದರಿ ಸಂಭಾವನೆಯನ್ನು ಏಕವ್ಯಕ್ತಿ ಆರೋಪಿತರಾಗಿರುವ ಇಲಾಖಾ ವಿಚಾರಣೆ ಪ್ರಕರಣಗಳಿಗೆ ಅನ್ವಯಿಸುವಂತೆ ಮುಂದುವರಿಸಿ, ಜಂಟಿ ಇಲಾಖಾ ವಿಚಾರಣೆಗಳಿಗೆ ಪ್ರತ್ಯೇಕ ಸಂಭಾವನೆ ನಿಗದಿಪಡಿಸಲಾಗಿದೆ. ಸರ್ಕಾರದ ಸೇವೆಯಲ್ಲಿರುವ ಅಧಿಕಾರಿಗಳನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಕ ಮಾಡಿದಾಗ ಮತ್ತು ನಿಗದಿಪಡಿಸಿರುವ ಅವಧಿಯಲ್ಲಿಯೇ ವಿಚಾರಣಾ ವರದಿಯನ್ನು ನೀಡುವ ಪ್ರಕರಣಗಳಲ್ಲಿ ಮಾತ್ರ ಅಂತಹ ವಿಚಾರಣಾಧಿಕಾರಿಗಳಿಗೆ ಸರ್ಕಾರವು ಮೇಲೆ (2)ರಲ್ಲಿ ಓದಲಾದ ದಿನಾಂಕ:03.02.2012ರ ಆದೇಶದಲ್ಲಿ ರೂ.5,000/–ಗಳ ಪ್ರೋತ್ಸಾಹಧನ/ಸಂಭಾವನೆಯನ್ನು ನಿಗದಿಪಡಿಸಿದೆ.

Ds1 / (A)

ಮೇಲ್ಕಂಡ ಸಂಭಾವನೆಯನ್ನು ಹೆಚ್ಚಳ ಮಾಡಲು ಬೇಡಿಕೆ ಸ್ವೀಕೃತವಾದ ಹಿನ್ನೆಲೆಯಲ್ಲಿ ಸರ್ಕಾರವು ಮೇಲೆ(4)ರಲ್ಲಿ ಓದಲಾದ ದಿನಾಂಕ:02.02.2019ರ ಆದೇಶದಲ್ಲಿ ಏಕವ್ಯಕ್ತಿ ಆರೋಪಿತರಾಗಿರುವ ಇಲಾಖಾ ವಿಚಾರಣೆ ಪ್ರಕರಣಗಳಲ್ಲಿ ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ರೂ.16,500/–ಗಳ (ಹದಿನಾರು ಸಾವಿರ ಐದು ನೂರು ರೂಪಾಯಿಗಳು) (ವಾಹನ ಭತ್ಯೆಯು ಸೇರಿದಂತೆ) ಸಂಭಾವನೆಯನ್ನು ಹಾಗೂ ವಿಚಾರಣಾಧಿಕಾರಿಯಾಗಿ ನೇಮಕವಾದ ಮತ್ತು ನಿಗದಿಪಡಿಸಿದ ಅವಧಿಯಲ್ಲಿ ವಿಚಾರಣಾ ವರದಿಯನ್ನು ಸಲ್ಲಿಸಿದ ಸರ್ಕಾರದ ಸೇವೆಯಲ್ಲಿರುವ ಅಧಿಕಾರಿಗಳಿಗೆ ರೂ.5,500/–ಗಳ(ಐದು ಸಾವಿರ ಐದು ನೂರು ರೂಪಾಯಿಗಳು) ಪ್ರೋತ್ಸಾಹಧನವನ್ನು ನಿಗದಿಪಡಿಸಿದೆ.

ಕರ್ನಾಟಕ ರಾಜ್ಯ ನಿವೃತ್ತ ನ್ಯಾಯಾಧೀಶರ ಅಧಿಕಾರಿಗಳ ಸಂಘವು(ರಿ) ಸರ್ಕಾರಕ್ಕೆ ಮನವಿ ಸಲ್ಲಿಸಿ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿಯಾಗಿ ನೇಮಕಗೊಳ್ಳುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ನೀಡಲಾಗುತ್ತಿರುವ ಸಂಚಿತ ಸಂಭಾವನೆಯೊಂದಿಗೆ ದೈನಂದಿನ ವಿಚಾರಣೆಗಾಗಿ ಪ್ರತ್ಯೇಕವಾಗಿ ದಿನಭತ್ಯೆಯನ್ನು ನಿಗದಿಪಡಿಸುವಂತೆ ಕೋರಿದ ಹಿನ್ನೆಲೆಯಲ್ಲಿ ಸರ್ಕಾರವು ಪ್ರಕರಣವನ್ನು ಮತ್ತೊಮ್ಮೆ ಪರಿಶೀಲಿಸಿದ ಸಂದರ್ಭದಲ್ಲಿ ಏಕವ್ಯಕ್ತಿಯ ವಿಚಾರಣೆಯು ಸಾಮಾನ್ಯವಾಗಿ ಕನಿಷ್ಠ 5 ರಿಂದ 10 ಅಥವಾ 12 ಸಿಟ್ಟಿಂಗ್‌ಗಳನ್ನು ಹಾಗೂ ಜಂಟಿ ಇಲಾಖಾ ವಿಚಾರಣೆಯು ಕನಿಷ್ಠ 10 ರಿಂದ 15, 20, 25 ಸಿಟ್ಟಿಂಗ್‌ಗಳನ್ನು ಒಳಗೊಂಡಿರುತ್ತವೆ. ಆಪಾದನೆ ಮತ್ತು ಅದರಲ್ಲಿ ಒಳಗೊಂಡಿರುವ ಸಾಕ್ಷಿಗಳು, ಆ ವಿಚಾರಣೆಗೆ ಅಗತ್ಯವಾದ ದಾಖಲೆಗಳನ್ನು ಸಂಗ್ರಹಿಸುವ ಅಂಶಗಳು ಒಳಗೊಂಡಂತೆ ಪ್ರಕರಣವನ್ನು ಆದ್ಯಂತವಾಗಿ ಅಧ್ಯಯನ ಮಾಡಿ ನಿಷ್ಪಕ್ಷಪಾತವಾಗಿ ವಿಚಾರಣೆ ನಡೆಸಿ ವರದಿಯನ್ನು ಸಲ್ಲಿಸಲು ಸಮಯ ಮತ್ತು ಪರಿಶ್ರಮದ ಅಗತ್ಯತೆ ಇರುತ್ತದೆ. ಇಂತಹ ಕೆಲಸಕ್ಕೆ ನ್ಯಾಯಯುತ ಹಾಗೂ ಸಮಂಜಸವಾದ ಮೊತ್ತವನ್ನು ನೀಡಬೇಕೆಂಬ ಅಂಶವನ್ನು ಪರಿಗಣಿಸಿ, ಸರ್ಕಾರವು ವಿಚಾರಣಾಧಿಕಾರಿಗಳಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ನಿಗಧಿಪಡಿಸಿದ ಸಂಭಾವನೆ (ಜಂಟಿ

ಇಲಾಖಾ ಪ್ರಕರಣಗಳಲ್ಲಿನ ಸಂಭಾವನೆಯು ಸೇರಿದಂತೆ) ಹಾಗೂ ಸರ್ಕಾರಿ ಸೇವೆಯಲ್ಲಿರುವ ಅಧಿಕಾರಿಗಳನ್ನು ವಿಚಾರಣಾಧಿಕಾರಿಗಳಾಗಿ ನೇಮಕ ಮಾಡಿದಾಗ ನೀಡಲಾಗುತ್ತಿರುವ ಪ್ರೋತ್ಸಾಧನವನ್ನು ಹೆಚ್ಚಿಸುವುದು ಸೂಕ್ತವೆಂದು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 11 ಸೇಇವಿ 2019, ದಿನಾಂಕ: 24.04.2019**

ಪ್ರಸ್ತಾವನೆಯಲ್ಲಿ ತಿಳಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)ನಿಯಮಗಳು, 1957ರಡಿ ಕೈಗೊಳ್ಳುವ ಇಲಾಖಾ ವಿಚಾರಣೆಯಲ್ಲಿ ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ಮತ್ತು ಸರ್ಕಾರದ ಸೇವೆಯಲ್ಲಿರುವ ಅಧಿಕಾರಿಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಕೆಳಕಂಡ ಸಂಭಾವನೆ (ವಾಹನ ಭತ್ಯೆಯೂ ಸೇರಿದಂತೆ)/ ಪ್ರೋತ್ಸಾಹಧನಗಳನ್ನು ನಿಗದಿಪಡಿಸಲಾಗಿದೆ.

| ಕ್ರ.ಸಂ. | ವಿಚಾರಣೆ ಸ್ವರೂಪ | ಪರಿಷ್ಕೃತ ಸಂಭಾವನೆ |
|---|---|---|
| (1) ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ | | |
| (ಅ) | ಏಕ ವ್ಯಕ್ತಿ ಆರೋಪಿತರಾಗಿರುವ ಇಲಾಖಾ ವಿಚಾರಣೆಗಳಿಗೆ | ರೂ.30,000/-<br>(ಮೂವತ್ತು ಸಾವಿರ ರೂಪಾಯಿಗಳು) |
| (ಆ) | ಇಬ್ಬರಿಂದ ಐದು ಆರೋಪಿತ ವ್ಯಕ್ತಿಗಳಿರುವ ಜಂಟಿ ಇಲಾಖಾ ವಿಚಾರಣೆ ಪ್ರಕರಣಗಳಿಗೆ | ರೂ.40,000/-<br>(ನಲವತ್ತು ಸಾವಿರ ರೂಪಾಯಿಗಳು) |
| (ಇ) | ಐದು ಆರೋಪಿತ ವ್ಯಕ್ತಿಗಳಿಗಿಂತ ಹೆಚ್ಚಿನ ಆರೋಪಿತ ವ್ಯಕ್ತಿಗಳಿರುವ ಜಂಟಿ ಇಲಾಖಾ ವಿಚಾರಣಾ ಪ್ರಕರಣಗಳಿಗೆ | ರೂ.50,000/-<br>(ಐವತ್ತು ಸಾವಿರ ರೂಪಾಯಿಗಳು) |
| (2) | ವಿಚಾರಣಾಧಿಕಾರಿಯಾಗಿ ನೇಮಕವಾದ ಮತ್ತು ನಿಗಧಿಪಡಿಸಿದ ಅವಧಿಯಲ್ಲಿ ವಿಚಾರಣಾ ವರದಿಯನ್ನು ಸಲ್ಲಿಸಿದ ಸರ್ಕಾರದ ಸೇವೆಯಲ್ಲಿರುವ ಅಧಿಕಾರಿಗಳಿಗೆ | ರೂ.11,000/-<br>(ಹನ್ನೊಂದು ಸಾವಿರ ರೂಪಾಯಿಗಳು) |

ಈ ಆದೇಶವನ್ನು ಆರ್ಥಿಕ ಇಲಾಖೆಯು (ACS, FD.No.2639) ದಿನಾಂಕ:02.04.2019ರಂದು ನೀಡಿದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

24/04/19

(ಎ.ವಿ.ಶೈಲಜ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-2)

**ಇವರಿಗೆ:** ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಇದರ 100 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಒದಗಿಸಲು ಕೋರಿದೆ.

**ಪ್ರತಿ:**

1. ಪ್ರಧಾನ ಮಹಾಲೇಖಪಾಲರು, (ಜಿ &ಎಸ್ಎಸ್ಎ), (ಇ &ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.

2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು/ಪ್ರಧಾನ ಕಾರ್ಯದರ್ಶಿಯವರು/ ಕಾರ್ಯದರ್ಶಿಯವರು
5. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು
6. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು
7. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯಮಾರ್ಗ, ಚಾಣಕ್ಯಪುರಿ, ನವದೆಹಲಿ -110 021.
8. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ಪರಿಷತ್ತು, ಬೆಂಗಳೂರು
9. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
10. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
11. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
12. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯಭವನ, ಕೆ.ಜಿ.ರಸ್ತೆ, ಬೆಂಗಳೂರು- 560 009.
13. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ, ಬಹುಮಹಡಿ ಕಟ್ಟಡ, ಬೆಂಗಳೂರು
14. ಎಲ್ಲಾ ಇಲಾಖಾ ಮುಖ್ಯಸ್ಥರು
15. ಎಲ್ಲಾ ಪ್ರಾದೇಶಿಕ ಆಯುಕ್ತರು
16. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
17. ಸರ್ಕಾರದ ಎಲ್ಲಾ ಅಪರ / ಜಂಟಿ / ಉಪ / ಅಧೀನ ಕಾರ್ಯದರ್ಶಿಗಳು
18. ಶಾಖಾ ರಕ್ಷಾ ಕಡತ / ಅಧಿಕ ಪ್ರತಿಗಳು

(* ಮುಖ ಪತ್ರದೊಂದಿಗೆ)